ಯಾದಗಿರಿ ಮತ್ತು ಬಿಜಾಪುರ ಜಿಲ್ಲೆಗಳ ಕೃಷ್ಣಾ ಮೇಲ್ದಂಡೆ ಯೋಜನಾ ಪ್ರದೇಶದಲ್ಲಿ, ಬೆಳಗಾಂ ಮತ್ತು ಬಾಗಲಕೋಟೆ ಜಿಲ್ಲೆಗಳ ಘಟಪ್ರಭಾ ಯೋಜನಾ ಪ್ರದೇಶದಲ್ಲಿ ಹಾಗೂ ಧಾರವಾಡ, ಗದಗ ಮತ್ತು ಬಳಗಾಂ ಜಿಲ್ಲೆಗಳ ಮಲಪ್ರಭಾ ಯೋಜನಾ ಪ್ರದೇಶದಲ್ಲಿ ಸವಳು-ಜವಳು ಸಮಸ್ಯೆಯನ್ನು ಬಗೆಹರಿಸಲಾಗುವುದು.

ಈ) ಈ ಯೋಜನೆಯಲ್ಲಿ ಬೀದರ್ ಜಿಲ್ಲೆಯ ಯಾವುದೇ ನೀರಾವರಿ ಯೋಜನೆಗಳು ಸೇರಿರುವುದಿಲ್ಲ.

**ಜಲಾಶಯಗಳ ಬಳಿ ಉದ್ಯಾನವನಗಳನ್ನು ನಿರ್ಮಿಸುವುದು**

738(776) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) : ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :

ಅ) ರಾಜ್ಯದ ಜಲಾಶಯಗಳಿಗೆ ಪ್ರವಾಸೋದ್ಯಮ ಸ್ಥಳದ ಸ್ಪರ್ಶವನ್ನು ನೀಡುವ ಸಲುವಾಗಿ ರಾಜ್ಯದ ಯಾವ ಯಾವ ಜಲಾಶಯಗಳಡಿಯಲ್ಲಿ ಉದ್ಯಾನವನಗಳನ್ನು ಅಭಿವೃದ್ಧಿಪಡಿಸಲು ಯೋಜನೆಯನ್ನು ರೂಪಿಸಲಾಗಿದೆ. ಈ ಪ್ರತಿ ಅಂದಾಜು ವೆಚ್ಚವೆಷ್ಟು (ಜಲಾಶಯವಾರು ಅಂಕಿ-ಅಂಶಗಳನ್ನು ಒದಗಿಸುವುದು) ;

ಆ) ಇದಕ್ಕಾಗಿ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ ಹಾಗೂ ಈ ಹಣದಿಂದ ಯಾವ ಯಾವ ಜಲಾಶಯಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ ;

ಇ) ಮೇಲ್ಕಂಡ ಯೋಜನೆಗಳಡಿಯಲ್ಲಿ ಅತ್ಯಂತ ಹಿಂದುಳಿದ ಬೀದರ್ ಜಿಲ್ಲೆಯ ಕಾರಂಜಾ ಜಲಾಶಯವನ್ನೂ ಸಹ ಆಯ್ಕೆ ಮಾಡಲಾಗಿದೆಯೇ ;

ಈ) ಹಾಗಿದ್ದಲ್ಲಿ, ಈ ಜಲಾಶಯದಲ್ಲಿ ಉದ್ಯಾನವನವನ್ನು ಅಭಿವೃದ್ಧಿಪಡಿಸಲು ಸರ್ಕಾರ ಯಾವ ಕ್ರಮಗಳನ್ನು ಹಮ್ಮಿಕೊಂಡಿದೆ ?

ಶ್ರೀ ಬಸವರಾಜ್ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) :

ಅ) ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳ ಕೆಳಭಾಗದಲ್ಲಿ ಉದ್ಯಾನವನಗಳನ್ನು ಅಭಿವೃದ್ಧಿಪಡಿಸಲು ಅನುಕ್ರಮವಾಗಿ

ರೂ.8550.74 ಲಕ್ಷ ಹಾಗೂ ರೂ. 48.29 ಲಕ್ಷಗಳ ಅಂದಾಜು ವೆಚ್ಚದಲ್ಲಿ ಯೋಜನೆ ರೂಪಿಸಲಾಗಿದೆ.

ರಾಜ್ಯ ವಿವಿಧ ಜಲಾಶಯಗಳಿಗೆ ಪ್ರವಾಸೋದ್ಯಮ ಸ್ಥಳದ ಸ್ಪರ್ಶವನ್ನು ನೀಡುವ ಸಲುವಾಗಿ ಸಮಿತಿಯನ್ನು ಸರ್ಕಾರದ ಆದೇಶ ಸಂಖ್ಯೆ : ಜಸಂಇ/41/ಎಂಬಿಐ/2010, ದಿನಾಂಕ : 25.05.2010ರಲ್ಲಿ ರಚಿಸಲಾಗಿದೆ. ಸದರಿ ಸಮಿತಿಯು ರಾಜ್ಯದ ಆಯ್ದ ಜಲಾಶಯಗಳಲ್ಲಿ ಬೃಂದಾವನ ಮಾದರಿಯ ಉದ್ಯಾನವನಗಳನ್ನು ಅಭಿವೃದ್ಧಿಪಡಿಸಲು ಯೋಚಿಸಲಾಗಿದೆ.

| ಯೋಜನೆಯ ಹೆಸರು | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) |
|---|---|
| ಹಿಡಕಲ್ ಡ್ಯಾಂ ಸೈಟ್ | 2600 |
| ಧೂಪದಾಳ ವಿಯರ್ | 700 |
| ಮಲಪ್ರಭಾ ಡ್ಯಾಂ ಸೈಟ್ | 800 |
| ಭದ್ರಾ ಡ್ಯಾಂ ಸೈಟ್ | 4000 |
| ಗಾಜನೂರು ಡ್ಯಾಂ | 300 |
| ಗಂಡೋರಿನಾಲಾ | 700 |

ಕಾವೇರಿ ನೀರಾವರಿ ನಿಗಮ ವ್ಯಾಪ್ತಿಯಲ್ಲಿನ ಹಾರಂಗಿ, ಹೇಮಾವತಿ, ಯಗಚಿ, ಸುವರ್ಣಾವತಿ, ಮಂಚನಬೆಲೆ, ಅರ್ಕಾವತಿ, ಕಣ್ವ, ಚಕ್ಲಿಹೊಳೆ, ಚಿಕ್ಕ ಹೊಳೆ, ಗುಂಡಾಲ್, ನುಗು ಮತ್ತು ಮಾರ್ಕೋನಹಳ್ಳಿ ಜಲಾಶಯಗಳ ಸನಿಹ ಖಾಸಗಿ ಸಹಭಾಗಿತ್ವದೊಂದಿಗೆ ಉದ್ಯಾನವನಗಳನ್ನು ಅಭಿವೃದ್ಧಿಪಡಿಸಲು ಯೋಜಿಸಲಾಗಿದೆ.

ಆ) ಈ ಸಂಬಂಧ, ಪ್ರಸಕ್ತ ಸಾಲಿನಲ್ಲಿ ಆಲಮಟ್ಟಿ ಜಲಾಶಯದಲ್ಲಿ ರೂ. 258.75 ಲಕ್ಷಗಳು ಮತ್ತು ನಾರಾಯಣಪುರ ಜಲಾಶಯದಲ್ಲಿ 11.12 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ.

ಇ) ಬೀದರ್ ಜಿಲ್ಲೆಯ ಕಾರಂಜಾ ಹಾಗೂ ಚಂದ್ರಂಪಳ್ಳಿ ಜಲಾಶಯಗಳಲ್ಲಿ ಪ್ರವಾಸಿ ತಾಣಗಳ ಅಭಿವೃದ್ಧಿಗಾಗಿ ಅನುಕ್ರಮವಾಗಿ ರೂ.157.04 ಲಕ್ಷ ಹಾಗೂ ರೂ. 71.32 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಪ್ರಸಾಸೋದ್ಯಮ ಇಲಾಖೆಯಿಂದ ಉದ್ದೇಶಿಸಲಾಗಿದೆ.

ಈ) ಈ ಸಂಬಂಧ ಚಂದ್ರಂಪಳ್ಳಿ ಜಲಾಶಯದ ಬಳಿ 4.57 ಎಕರೆ ಪ್ರದೇಶವನ್ನು ಪ್ರವಾಸೋದ್ಯಮ ಇಲಾಖೆಗೆ ಹಸ್ತಾಂತರಿಸಲಾಗಿದೆ. ಹಾಗೂ ಕಾರಂಜಾ ಯೋಜನೆ ವ್ಯಾಪ್ತಿಯಲ್ಲಿ ಸ್ಥಳದ ಬಗ್ಗೆ ಪರಿಶೀಲನೆಯಲ್ಲಿದೆ.

**ಸಣ್ಣ ನೀರಾವರಿ ಕಾಮಗಾರಿಗಳು**

739(777) ಶ್ರೀ ಈಶ್ವರ ಭೀಮಣ್ಣ ಖಂಡ್ರೆ (ಭಾಲ್ಕಿ) : ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :

ಅ) ಬೀದರ್ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ 40 ರಿಂದ 2000 ಹೆಕ್ಟೇರ್ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವ ವಿವಿಧ ಯೋಜನೆಯಡಿಯಲ್ಲಿ ಯಾವ ಯಾವ ಕಾಮಗಾರಿಗಳು ಪ್ರಗತಿಯಲ್ಲಿವೆ ; (ವಿಧಾನಸಭಾ ಕ್ಷೇತ್ರವಾರು ಅಂಕಿ-ಅಂಶಗಳನ್ನು ಒದಗಿಸುವುದು) ;

ಆ) ಈ ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಯಿತು ಹಾಗೂ ಈ ಪೈಕಿ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ ಮತ್ತು ಎಷ್ಟು ಕಾಮಗಾರಿಗಳು ಪ್ರಗತಿಯಲ್ಲಿವೆ (ಪೂರ್ಣ ಕಾಮಗಾರಿವಾರು ವಿವರಗಳನ್ನು ಒದಗಿಸುವುದು) ;

ಇ) ಜಿಲ್ಲೆಯಲ್ಲಿ ಮೇಲ್ಕಂಡ ಯೋಜನೆಗೆ ಪ್ರಸಕ್ತ ಸಾಲಿನಲ್ಲಿ ವಿವಿಧ ಕ್ಷೇತ್ರಗಳಲ್ಲಿನ ಕಾಮಗಾರಿಗಳಿಗಾಗಿ ಎಷ್ಟು ಹಣವನ್ನು ಇಂದಿನವರೆಗೆ ಬಿಡುಗಡೆ ಮಾಡಲಾಗಿದೆ ಮತ್ತು ಖರ್ಚು ಮಾಡಲಾಗಿದೆ (ಪ್ರತಿ ಕಾಮಗಾರಿಗೆ ಖರ್ಚು ಮಾಡಿದ ಹಣದ ವಿವರಗಳನ್ನು ಒದಗಿಸುವುದು) ?

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು) :

ಅ) ಮತ್ತು ಆ) ವಿವರಗಳನ್ನು ಅನುಬಂಧ-1 ರಲ್ಲಿ ನೀಡಲಾಗಿದೆ.

ಇ) ವಿವರಗಳನ್ನು ಅನುಬಂಧ-2ರಲ್ಲಿ ನೀಡಲಾಗಿದೆ.